## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಾರ್ಡ್ ನಂ.105, ಅಗ್ರಹಾರ ದಾಸರಹಳ್ಳಿ ಎಂ.ಸಿ. ಲೇಔಟ್ ನಲ್ಲಿ ನಿರ್ಮಾಣವಾಗಿರುವ ಸಾರ್ವಜನಿಕ ಆಸ್ಪತ್ರೆಯನ್ನು ಪ್ರಾರಂಭಿಸಲು ಅವಶ್ಯಕವಿರುವ ಸಲಕರಣೆಗಳು, ಉಪಕರಣಗಳಿಗೆ ಹೆಚ್ಚುವರಿಯಾಗಿ ಅಗತ್ಯವಿರುವ ರೂ.49.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್ ವೈ 2018, ದಿನಾಂಕ: 20-09-2019.
2. ಸರ್ಕಾರದ ಆದೇಶ ಸಂಖ್ಯೆ: ನಅಇ 84 ಎಂಎನ್ ವೈ 2020, ದಿನಾಂಕ: 17-03-2020.
3. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಮುಆ.ಪಿ.ಎಸ್.ಆರ್(ಜಿ)3938/21-22, ದಿನಾಂಕ: 03-01-2022.
4. ಸರ್ಕಾರದ ಸಮಸಂಖ್ಯೆಯ ಪತ್ರ ಸಂಖ್ಯೆ: 07-03-2022.
5. ಆ.ಕು.ಕ/ಇಂ.ಘ/ಮು.ಇಂ/ತಾಂಸ-3/ಸಇಂ-6/ದಾಸರಹಳ್ಳಿ/2021-22 /3863, ದಿನಾಂಕ: 21-03-2022.

* * * * *

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ದಿನಾಂಕ: 20-09-2019ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿ, ಒದಗಿಸಿರುವ ಅನುದಾನದಲ್ಲಿ ಕೈಗೊಳ್ಳಲು ಉದ್ದೇಶಿಸಿ ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 01-02-2019 ರಂತೆ ಅನುಮೋದಿಸಿದ್ದ "ಮುಖ್ಯಮಂತ್ರಿಗಳ ನವ ಬೆಂಗಳೂರು" ಯೋಜನೆಯನ್ನು ರದ್ದುಪಡಿಸಿ, ಪರ್ಯಾಯವಾಗಿ ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆ ಅಡಿಯಲ್ಲಿ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿ, ಅನುಬಂಧ-6ರ ಕ್ರಮ ಸಂಖ್ಯೆ.265ರಲ್ಲಿ "Construction of General Hospital in the premises of referral Hospital at Govindarajanagara Constituency, Agrahara Dasarahalli in ward no. 105" ರ ಕಾಮಗಾರಿಗೆ ರೂ.35.00 ಕೋಟಿಗಳ ಅನುದಾನವನ್ನು ನಿಗಧಿಪಡಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ: (2) ರಲ್ಲಿ ಓದಲಾದ ದಿನಾಂಕ: 17-03-2020ರ ಆದೇಶದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019 ರಲ್ಲಿ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಕ್ರಿಯಾ ಯೋಜನೆಯ ಅನುಬಂಧ-6ರ ಕ್ರಮ ಸಂಖ್ಯೆ: 265ರ "Construction of General Hospital in the premises of referral hospital at Govindarajanagara Constituency, Agrahara dasarahalli in ward no. 105" ಪ್ಯಾಕೇಜಿನ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಿ, ದಿನಾಂಕ: 10-03-2020 ರಂದು ನಡೆದ

...2/-

Scanned with CamScanner

ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಟೆಂಡರ್ ಗಿಟ್ಟ ಮೊತ್ತವಾದ ರೂ.30,33,16,633-48 ಗಳಿಗೆ ಹೋಲಿಸಿದಾಗ 4.99% ಅಧಿಕ ಅಂದರೆ ರೂ.31,84,52,133-49 ಗಳಿಗೆ ಮಿತಿಗೊಳಿಸಿ Bhimashankar Meher Satyanarayana Mandavilli (MVV Satyanarayana) ರವರ ಟೆಂಡರ್ ಗೆ ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ: (3) ರಲ್ಲಿ ಓದಲಾದ ದಿನಾಂಕ: 03-01-2022ರ ಪತ್ರದಲ್ಲಿ ಮುಖ್ಯ ಆಯುಕ್ತರು, ಬಿಬಿಎಂಪಿ ರವರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿಭಾಗದಲ್ಲಿ 06 ರೆಫರಲ್ ಆಸ್ಪತ್ರೆಗಳು, 26 ಹೆರಿಗೆ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ. ಈ ಆಸ್ಪತ್ರೆಗಳಲ್ಲಿ ತಾಯಿ ಮತ್ತು ಮಕ್ಕಳ ಆರೋಗ್ಯಕ್ಕೆ ಒತ್ತು ಕೊಟ್ಟು Primary ಮತ್ತು Secondary Level ಕೇರ್ ಸರ್ವಿಸಸ್ ನೀಡಲಾಗುತ್ತಿದೆ. ಗರ್ಭಿಣಿಯರ ತಪಾಸಣೆ, ಸಹಜ ಹೆರಿಗೆ, ಸಿಜೇರಿಯನ್ ಶಸ್ತ್ರಚಿಕಿತ್ಸೆ, ಗರ್ಭಪಾತ, ಸಂತಾನಹರಣ ಶಸ್ತ್ರಚಿಕಿತ್ಸೆಗಳು (Tubectomy & Laproscopy) ಸ್ತ್ರೀರೋಗಕ್ಕೆ ಸಂಬಂಧಿಸಿದಂತೆ ಶಸ್ತ್ರಚಿಕಿತ್ಸೆಗಳು, ನವಜಾತ ಶಿಶುವಿನ ಆರೈಕೆ, ರೋಗ ನಿರೋಧಕ ಚುಚ್ಚುಮದ್ದು, ನಾಯಿ ಕಡಿತಕ್ಕೆ ಚುಚ್ಚುಮದ್ದು, ಸಮಗ್ರ ಆರೋಗ್ಯ ಸೇವೆಗಳಡಿಯಲ್ಲಿ ದಂತ ವೈದ್ಯಕೀಯ ಸೇವೆ, ಫಿಜೀಷಿಯನ್, ನೇತ್ರ ತಜ್ಞರು, ಕಿವಿ ಮೂಗು ಮತ್ತು ಗಂಟಲು ತಜ್ಞರುಗಳ ಸೇವೆಗಳನ್ನು ಹಾಗೂ ಇತರೇ National Programmes ಸೇವೆಗಳನ್ನು ನೀಡಲಾಗುತ್ತಿದೆ.

ಪಾಲಿಕೆಯ ವಾರ್ಡ್ ಸಂಖ್ಯೆ: 105ರ ಅಗ್ರಹಾರ ದಾಸರಹಳ್ಳಿ, ಎಂ.ಸಿ. ಲೇಔಟ್, ವಿಜಯನಗರ, ಬೆಂಗಳೂರು-560 040 ರಲ್ಲಿ ಇದ್ದ ಹೊಸಹಳ್ಳಿ ರೆಫರಲ್ ಆಸ್ಪತ್ರೆಯ ಕಟ್ಟಡವನ್ನು ಸಂಪೂರ್ಣವಾಗಿ ಕೆಡವಿ (Demolish) 296 ಹಾಸಿಗೆ ಸಾಮರ್ಥ್ಯವುಳ್ಳ Tertiary Care ಸಾರ್ವಜನಿಕ ಆಸ್ಪತ್ರೆಯನ್ನು ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ ಸರ್ಕಾರದ ನಗರೋತ್ಥಾನ ಅನುದಾನದಡಿಯಲ್ಲಿ ರೂ.35.00 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗುತ್ತಿದೆ. ಸದರಿ ಕಟ್ಟಡವು ನೆಲಮಾಳಿಗೆ (Basement), ನೆಲಮಹಡಿ ಮತ್ತು ನಾಲ್ಕು ಮಹಡಿಗಳನ್ನು ಹೊಂದಿದ್ದು, ಕಾಮಗಾರಿಯು ಅಂತಿಮ ಹಂತದಲ್ಲಿದೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಆರೋಗ್ಯ ಸೇವೆಗಳನ್ನು 3 level ಗಳಲ್ಲಿ (Primary, Secondary and Tertiary) ನೀಡಲಾಗುತ್ತಿದೆ. ಅಗ್ರಹಾರ ದಾಸರಹಳ್ಳಿ ಸಾರ್ವಜನಿಕ ಆಸ್ಪತ್ರೆಯು Tertiary Level ಆಸ್ಪತ್ರೆಯಂತೆ ಬಡಜನರಿಗೆ ಅನುಕೂಲವಾಗುವಂತೆ ICU, NICU, SNCU, Cardiology ಮತ್ತು ತುರ್ತು ಚಿಕಿತ್ಸೆಗಾಗಿ ನಿರ್ಮಾಣ ಆಗುತ್ತಿದೆ.

ಸದರಿ ಆಸ್ಪತ್ರೆಯಲ್ಲಿ OBG Department with HDU, General Medicine, General Surgery, ENT Department, Orthopedics, Dental services, Opthalmology, Radiology, Pediatrics & NICU, General ICU, Casualty ಸೇವೆಗಳನ್ನು ನೀಡಲು ಉದ್ದೇಶಿಸಲಾಗಿದೆ ಹಾಗೂ ಮೂರನೇ ಮಹಡಿಯಲ್ಲಿ Cardiac Department ಅನ್ನು ತೆರೆಯಲು ಉದ್ದೇಶಿಸಲಾಗಿದೆ. ಈ ಸಂಬಂಧ ಅಗತ್ಯವಿರುವ ಮಾನವಸಂಪನ್ಮೂಲಗಳ ಮಂಜೂರಾತಿಗಾಗಿ ಸರ್ಕಾರಕ್ಕೆ ದಿನಾಂಕ: 23-11-2021 ರ ಅನುಸಾರ ಕಡತ ಸಲ್ಲಿಸಿರುವುದಾಗಿ ಬಿಬಿಎಂಪಿ ಮುಖ್ಯ ಆಯುಕ್ತರು ತಿಳಿಸಿರುತ್ತಾರೆ.

...3/-

Scanned with CamScanner

ಮುಂದುವರೆದಂತೆ, ಸದರಿ 200 ಹಾಸಿಗೆ ಸಾಮರ್ಥ್ಯವುಳ್ಳ ಸಾರ್ವಜನಿಕ ಆಸ್ಪತ್ರೆಗೆ ಅಗತ್ಯವಿರುವ ಉಪಕರಣಗಳು, ಸಲಕರಣೆಗಳು ಇತರೇ ವಿವರಗಳನ್ನು ಅನುಬಂಧ-1 ರಂತೆ ಪಟ್ಟಿ ಮಾಡಲಾಗಿರುತ್ತದೆ ಎಂದು ತಿಳಿಸುತ್ತಾ, ಸದರಿ ಉಪಕರಣಗಳು, ಸಲಕರಣೆಗಳು ಇತರೇ ಪರಿಕರಗಳಿಗೆ ಅಂದಾಜು ರೂ.25.00 ಕೋಟಿಗಳ ಮೊತ್ತವು ತಗುಲಲಿದ್ದು, ಸದರಿ ಅನುದಾನವನ್ನು ಸರ್ಕಾರದಿಂದ ಬಿಡುಗಡೆ ಮಾಡುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ: (4) ರಲ್ಲಿ ಓದಲಾದ ದಿನಾಂಕ: 07-03-2022ರ ಸರ್ಕಾರದ ಪತ್ರದಲ್ಲಿ, ಕೆಲವು ಅಂಶಗಳಿಗೆ ಮಾಹಿತಿ / ಸ್ಪಷ್ಟೀಕರಣವನ್ನು ನೀಡುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರನ್ನು ಕೋರಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ: (5) ರಲ್ಲಿ ಓದಲಾದ ದಿನಾಂಕ: 21-03-2022ರ ಪತ್ರದಲ್ಲಿ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರು, ಮಾನ್ಯ ವಸತಿ ಸಚಿವರು ಹಾಗೂ ಮಾನ್ಯ ಶಾಸಕರು ಹಾಗೂ ಗೋವಿಂದರಾಜನಗರ ವಿಧಾಸಭಾ ಕ್ಷೇತ್ರ ಇವರ ಕೋರಿಕೆಯ ಮೇರೆಗೆ ಸಲ್ಲಿಸಿರುವ ಬೆಂಗಳೂರು ನಗರದ ಬಿಬಿಎಂಪಿ ವ್ಯಾಪ್ತಿಯ ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್ ನಂ. 105ರ ಅಗ್ರಹಾರ ದಾಸರಹಳ್ಳಿಯಲ್ಲಿ ಬಿಬಿಎಂಪಿ ವತಿಯಿಂದ ನಿರ್ಮಾಣವಾಗುತ್ತಿರುವ 200 ಹಾಸಿಗೆಗಳ ಆಸ್ಪತ್ರೆಯ ಕಟ್ಟಡ ಕಾಮಗಾರಿಯ ಬಾಕಿ ಕಾಮಗಾರಿಗಳ ರೂ.4900.00 ಲಕ್ಷಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆಯೊಂದಿಗೆ, ಪ್ರಸಕ್ತ ಸಾಲಿನ ಯಾವುದೇ ಲೆಕ್ಕಶೀರ್ಷಿಕೆಯಡಿಯಲ್ಲಿ ಅನುದಾನ ಮೀಸಲಿರಿಸಿಲ್ಲದ ಕಾರಣ ಲೆಕ್ಕಶೀರ್ಷಿಕೆ: 4210-01-110-1-01-386 ಅಡಿಯಲ್ಲಿ ರೂ.4900.00 ಲಕ್ಷಗಳ ಅನುದಾನವನ್ನು ಕಲ್ಪಿಸುವಂತೆ ಕೋರಿರುತ್ತಾರೆ.

ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರ ಪ್ರಸ್ತಾವನೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 14 ಎಂಎನ್‌ವೈ 2022 (ಇ)**
**ಬೆಂಗಳೂರು, ದಿನಾಂಕ: 19-04-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಾರ್ಡ್ ನಂ.105, ಅಗ್ರಹಾರ ದಾಸರಹಳ್ಳಿ, ಎಂ.ಸಿ. ಲೇಔಟ್ ನಲ್ಲಿ ನಿರ್ಮಾಣವಾಗಿರುವ ಸಾರ್ವಜನಿಕ ಆಸ್ಪತ್ರೆಯನ್ನು ಪ್ರಾರಂಭಿಸಲು ಅವಶ್ಯಕವಿರುವ ಸಲಕರಣೆಗಳು, ಉಪಕರಣಗಳಿಗೆ ಹೆಚ್ಚುವರಿಯಾಗಿ ಅಗತ್ಯವಿರುವ ರೂ.25.00 ಕೋಟಿಗಳನ್ನು ಮಾನ್ಯ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಯಲ್ಲಿ ಭರಿಸಲು ಈ ಆದೇಶದಲ್ಲಿನ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿದೆ.

..4/-

Scanned with CamScanner

**ಷರತ್ತುಗಳು:**

1. ಈ ಆದೇಶದಲ್ಲಿ ನೀಡಿರುವ ಅನುಮೋದನೆಯು ಕಾಮಗಾರಿಗಳ ಕ್ರಿಯಾ ಯೋಜನೆಗೆ ನೀಡಿರುವ ಅನುಮೋದನೆಯೇ ಹೊರತು, ಕಾಮಗಾರಿಗಳ ಅಂದಾಜು ಪಟ್ಟಿಗಳಿಗೆ ನೀಡಿರುವ ಆಡಳಿತಾತ್ಮಕ ಅನುಮೋದನೆಯಲ್ಲ, ಆದ್ದರಿಂದ, ಅನುಮೋದನೆಗೊಂಡ ಕಾಮಗಾರಿಗಳಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ವಿಸ್ತೃತ ಯೋಜನಾ ವರದಿಗಳನ್ನು (ಡಿಪಿಆರ್) ಸಿದ್ಧಪಡಿಸಿ, ನಿಯಮಾನುಸಾರ ತಾಂತ್ರಿಕ ಅನುಮೋದನೆ ಪಡೆದು, ಟೆಂಡರ್ ಕರೆದು ಕಾಮಗಾರಿಗಳನ್ನು ಅನುಷ್ಠಾನಗೊಳಿಸತಕ್ಕದ್ದು.

2. ಸದರಿ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ ಕಾಯ್ದೆ-1999 ಮತ್ತು ಕೆ.ಟಿ.ಪಿ.ಪಿ ನಿಯಮಗಳು-2000 ಹಾಗೂ e-procurement ಮುಖಾಂತರ ಕೈಗೊಂಡು, ಟೆಂಡರ್ ಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 47 ಎಸ್.ಎಫ್.ಸಿ 2016. ಬೆಂಗಳೂರು, ದಿನಾಂಕ: 14-06-2016 ಮತ್ತು 03-11-2016 ರಂತೆ ಸಕ್ಷಮ ಪ್ರಾಧಿಕಾರದ ಅನುಮೋದನೆಯನ್ನು ಪಡೆದು, ಕಾಮಗಾರಿಗಳನ್ನು ಅನುಷ್ಠಾನಗೊಳಿಸತಕ್ಕದ್ದು.

3. ಈ ಕ್ರಿಯಾ ಯೋಜನೆಯಲ್ಲಿ ತೆಗೆದುಕೊಳ್ಳಲಾಗಿರುವ ಕಾಮಗಾರಿಗಳನ್ನು ಇತರೆ ಯಾವುದೇ ಯೋಜನೆಯಡಿಯಲ್ಲಿ ಪುನಾರಾವರ್ತನೆ ಆಗಿರುವುದಿಲ್ಲ ಎಂಬುದನ್ನು ಮುಖ್ಯ ಆಯುಕ್ತರು ಬಿ.ಬಿ.ಎಂ.ಪಿ. ರವರು ಪೂರ್ವಾನ್ವಯವಾಗಿ ಖಚಿತಪಡಿಸಿಕೊಳ್ಳತಕ್ಕದ್ದು.

4. ಅನುಮೋದಿತ ಕಾಮಗಾರಿಗಳನ್ನು ನಿರ್ವಹಿಸುವ ಸಲುವಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮಗಳು-2000 ರಲ್ಲಿನ ಎಲ್ಲಾ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಬಿ.ಬಿ.ಎಂ.ಪಿ. ವತಿಯಿಂದ ಟೆಂಡರ್ ಪ್ರಕ್ರಿಯೆಯನ್ನು ಇ-ಪ್ರಕ್ಯೂರ್‌ಮೆಂಟ್ ಮೂಲಕ ಕಡ್ಡಾಯವಾಗಿ ಕೈಗೊಳ್ಳತಕ್ಕದ್ದು.

5. ಕರ್ನಾಟಕ ಆರ್ಥಿಕ ಸಂಹಿತೆ-1958, ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.

6. ಬಿಬಿಎಂಪಿಯು, ಬಾಕಿ ಅಗತ್ಯವಿರುವ ಅನುದಾನವನ್ನು ರಾಜ್ಯ ಸರ್ಕಾರದ ವಿಶೇಷ ಅನುದಾನದಲ್ಲಿ ಭರಿಸಲು, ಅಂದಾಜು ಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ಕೂಡಲೇ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

...5/-

Scanned with CamScanner

7. ಉಳಿದಂತೆ ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019 ರಲ್ಲಿನ ಎಲ್ಲಾ ಷರತ್ತುಗಳನ್ವಯ ಕಾಮಗಾರಿಗಳನ್ನು ಅನುಷ್ಠಾನ ಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಲಕ್ಷ್ಮೀಸಾಗರ್ ಎನ್.ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

**ಇವರಿಗೆ:**

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು,
6. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ 3 ಮತ್ತು 9) ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
11. ಸರ್ಕಾರದ ಉಪ ಕಾರ್ಯದರ್ಶಿಗಳು-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
12. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with CamScanner

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಿಬಿಎಂಪಿ ವ್ಯಾಪ್ತಿಯ ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಯಡಿ ನಿಗಧಿಪಡಿಸಿರುವ ರೂ.200.00 ಕೋಟಿಗಳ ಅಂದಾಜು ಮೊತ್ತದ ಕಾಮಗಾರಿಗಳ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಆಚರಣೆ ಸಂದರ್ಭದಲ್ಲಿ ಮಾಡಿರುವ ಘೋಷಣೆ.
2. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 14-01-2022.
3. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 25-02-2022 (11).
4. ಮುಖ್ಯ ಆಯುಕ್ತರು, ಬಿಬಿಎಂಪಿ ಇವರ ಪತ್ರ ಸಂಖ್ಯೆ: ಮು.ಆ/ಪಿಆರ್(G)/5134/2021-22, ದಿನಾಂಕ: 06-04-2022.

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಆಚರಣೆ ಸಂದರ್ಭದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಮಾಡಿರುವ ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ ಬೆಂಗಳೂರು ನಗರದಲ್ಲಿ ಬಿಬಿಎಂಪಿ ಮೂಲಕ ಮುಖ್ಯ ಮೂಲಭೂತ ಸೌಕರ್ಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಅಮೃತ ನಗರೋತ್ಥಾನ ಯೋಜನೆ ಅಡಿಯಲ್ಲಿ ರೂ.6000.00 ಕೋಟಿಗಳನ್ನು ಒದಗಿಸಲಾಗುವುದು ಎಂದು ಘೋಷಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ: (2) ರಲ್ಲಿ ಓದಲಾದ ದಿನಾಂಕ: 14-01-2022ರ ಆದೇಶದಲ್ಲಿ, ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಸಂದರ್ಭದಲ್ಲಿ ಘೋಷಿಸಿದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದ ರೂ.6000.00 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸರ್ಕಾರದ ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ: (3) ರಲ್ಲಿ ಓದಲಾದ ದಿನಾಂಕ: 25-02-2022 (11) ರ ಆದೇಶದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 14-01-2022 ರಂತೆ ಅನುಮೋದಿಸಲಾಗಿರುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸಂಬಂಧಿಸಿದಂತೆ ಗೋವಿಂದರಾಜನಗರ ವಿಧಾನ ಸಭಾ ಕ್ಷೇತ್ರಕ್ಕೆ ರೂ.200.00 ಕೋಟಿಗಳ ಅನುದಾನವನ್ನು ನಿಗಧಿಗೊಳಿಸಿ ಆದೇಶಿಸಲಾಗಿರುತ್ತದೆ.

...2/-

Scanned with CamScanner

ಮೇಲೆ ಕ್ರಮ ಸಂಖ್ಯೆ: (4) ರಲ್ಲಿ ಓದಲಾದ ದಿನಾಂಕ: 06-04-2022 ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬಿಬಿಎಂಪಿ ರವರು, ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಸಂದರ್ಭದಲ್ಲಿ ಘೋಷಿಸಿದ್ದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು "ಅಮೃತ ನಗರೋತ್ಥಾನ ಯೋಜನೆ" ಅಡಿಯಲ್ಲಿ ರೂ.6000.00 ಕೋಟಿಗಳನ್ನು ಒದಗಿಸಲಾಗುವುದೆಂದು ಘೋಷಿಸಿರುತ್ತಾರೆ. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂ.ಎನ್.ವೈ 2021 (ಇ) ಬೆಂಗಳೂರು ದಿನಾಂಕ: 25-02-2022 (11) ರಂತೆ ಗೋವಿಂದರಾಜನಗರ ವಿಧಾನ ಸಭಾ ಕ್ಷೇತ್ರಕ್ಕೆ ರೂ.200.00 ಕೋಟಿಗಳ ಅನುದಾನ ನಿಗಧಿಗೊಳಿಸಿ ಆದೇಶಿಸಲಾಗಿದೆ. ಕ್ಷೇತ್ರಕ್ಕೆ ಹಂಚಿಕೆ ಮಾಡಲಾಗಿರುವ ಅನುದಾನಕ್ಕೆ ರಸ್ತೆ ಅಭಿವೃದ್ಧಿ, ಉದ್ಯಾನವನಗಳ ಅಭಿವೃದ್ಧಿ ಮತ್ತು ನಿರ್ವಹಣೆ, ಕಟ್ಟಡಗಳ ಅಭಿವೃದ್ಧಿ, ಬೀದಿ ದೀಪಗಳ ನಿರ್ವಹಣೆ ಹಾಗೂ ಇತ್ಯಾದಿ ಮೂಲಭೂತ ಸೌಕರ್ಯಗಳನ್ನು ಕೈಗೊಳ್ಳಲು ಕ್ರಿಯಾ ಯೋಜನೆ ಅಂತಿಮಗೊಳಿಸುವ ಸಂದರ್ಭದಲ್ಲಿ ಮಾನ್ಯ ವಿಧಾನಸಭಾ ಕ್ಷೇತ್ರದ ಶಾಸಕರ ಕೋರಿಕೆಗಳನ್ನು ಪರಿಗಣಿಸಿ ಕ್ರಿಯಾ ಯೋಜನೆ ಅಂತಿಮಗೊಳಿಸುವಂತೆ ಸೂಚಿಸಿರುವ ಹಿನ್ನೆಲೆಯಲ್ಲಿ, ಮಾನ್ಯ ಶಾಸಕರು, ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರ ರವರು ಸೂಚಿಸಿರುವ ಹಾಗೂ ಮುಖ್ಯ ಅಭಿಯಂತರರು (ಪಶ್ಚಿಮ) ವಲಯ ರವರು ಸಲ್ಲಿಸಿರುವ ಪ್ರಸ್ತಾವನೆಯಂತೆ ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರಕ್ಕೆ ಮೀಸಲಿಟ್ಟಿರುವ ರೂ.200.00 ಕೋಟಿಗಳ ಅನುದಾನದಡಿಯಲ್ಲಿ ಕೈಗೊಳ್ಳುವ ಕಾಮಗಾರಿಗಳಿಗೆ ತಯಾರಿಸಿರುವ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕೋರಿರುತ್ತಾರೆ.

ಬಿಬಿಎಂಪಿ ಮುಖ್ಯ ಆಯುಕ್ತರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 194 ಎಂಎನ್‌ವೈ 2022 (ಇ), ಬೆಂಗಳೂರು, ದಿನಾಂಕ: 19-04-2022**

ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 25-02-2022 (11) ರಂತೆ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಯಡಿ ಗೋವಿಂದರಾಜನಗರ ವಿಧಾನ ಸಭಾ ಕ್ಷೇತ್ರಕ್ಕೆ ರೂ.200.00 ಕೋಟಿಗಳ ಅನುದಾನವನ್ನು ನಿಗದಿಗೊಳಿಸಿ ಆದೇಶಿಸಿದ್ದು, ಬಿಬಿಎಂಪಿ ಮುಖ್ಯ ಆಯುಕ್ತರ ಪ್ರಸ್ತಾವನೆಯಂತೆ, ಸದರಿ ರೂ.200.00 ಕೋಟಿಗಳ ಅಂದಾಜು ಮೊತ್ತದ ಈ ಕೆಳಕಂಡ ಕಾಮಗಾರಿಗಳ ಕ್ರಿಯಾಯೋಜನೆ ಪಟ್ಟಿಗೆ ಈ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿ ಆದೇಶಿಸಿದೆ.

| Sl No | Name of Work | Estimate Cost (Rs. In Crores) |
|---|---|---|
| 1 | Comprehensive Development of roads, drain and footpath in kaveripura ward no. 103 | 15.00 |

...3/-

Scanned with CamScanner

| | | |
|---|---|---|
| 2 | Comprehensive Development of roads, drain and footpath in Govindarajanagara in ward no. 104 | 5.00 |
| 3 | Comprehensive Development of roads, drain and footpath Agaraharadasarahalli in ward no. 105 AD Halli | 10.00 |
| 4 | Comprehensive Development of roads, drain and footpath in Dr. Rajkumar ward in ward no.106 | 5.00 |
| 5 | Improvements of roads, drains and footpath works at Marenahalli ward in ward no. 125 | 10.00 |
| 6 | Comprehensive Development of roads, drain and footpath in Maruthimandira ward no.126 | 15.00 |
| 7 | Comprehensive Development of roads, drain and footpath in Adarshanagar surroundings, Bairaveshwaranagar surrounding, BDA Layout surrounding and Kalyanagar surrounding Mudalapalya in ward No 127 | 10.00 |
| 8 | Comprehensive Development of roads, drain and footpath in Panchasheelanagar surrounding, Shakthi Garden, Annapoorneshwarinagar surrounding, SVG nagar surrounding Mudalapalya in ward No 127 | 10.00 |
| 9 | Comprehensive Development of roads, drain and footpath in Nagarabhavi ward No 128 | 20.00 |
| 10 | Comprehensive Development of roads, drain and footpath in ITI Layout 1st, 2nd and 3rd stage surrounding, Vinayaka layout surroundings and other areas of Nayandahalli ward no 131 | 10.00 |
| 11 | Comprehensive Development of roads, drain and footpath in Pantharapalya Surroundings, Gangonahalli Surroundings, Metro layout surrounding, Nayandahalli village surroundings and other Improvement works in Nayandahalli ward No 131 | 10.00 |
| **2. DEVELOPMENT OF PARKS** | | |
| 1 | Improvements of Parks in Govindarajanagara Constituency | 15.00 |
| **3. ELECTRICAL WORKS** | | |
| 1 | Providing LED Lights with CCMS system in Govindarajanagara Constituency | 18.00 |
| **4. BUILDING WORKS** | | |
| 1 | Additional works to Construction of Multi Speciality Hospital at MC Layout Agraharadasarahalli in ward no 105 | 12.00 |



Scanned with CamScanner

| | | |
|---|---|---|
| 2 | Dr\|\| B R Ambedkar stadium gallery work and other additional work phase II | 10.00 |
| 3 | Construction of Prarthana Mandira and Community halls in Govindarajanagara Constituency | 11.00 |
| 4 | Additional works to magadi road school building in ward no 106 | 8.00 |
| 5 | Construction of buildings in Govindarajanagara Constituency | 6.00 |
| | **Total** | **200.00** |

**ಷರತ್ತುಗಳು:**

1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಮೂಲಭೂತ ಸೌಕರ್ಯ ಮತ್ತು ರಸ್ತೆಗಳ ದುರಸ್ತಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಒಟ್ಟು ರೂ.200.00 ಕೋಟಿಗಳ ಅಂದಾಜು ಮೊತ್ತದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದು, ಅನುವು ಮಾಡಿರುವ ರೂ.200.00 ಕೋಟಿಗಳಿಗೆ ಮೀರಿದ ಯಾವುದೇ ವೆಚ್ಚ ಮತ್ತು ಟೆಂಡರ್ ಪ್ರೀಮಿಯಂಗಾಗಿ ಮಾಡುವ ವೆಚ್ಚವನ್ನು ಬಿಬಿಎಂಪಿಯು ತನ್ನ ಸ್ವಂತ ಅನುದಾನದಿಂದ ಭರಿಸತಕ್ಕದ್ದು. ಟೆಂಡರ್ ಪ್ರೀಮಿಯಂ ಮೊತ್ತವನ್ನು ಅಂದಾಜಿನಲ್ಲಿ ಅನುವು ಮಾಡತಕ್ಕದ್ದಲ್ಲ.

2. ಸದರಿ ಕಾಮಗಾರಿಗಳನ್ನು ರೂ.10.00 ಕೋಟಿಗಳಿಗೆ ಕಡಿಮೆ ಇರದಂತೆ ಪ್ಯಾಕೇಜ್ ಗಳನ್ನು ಮಾಡಿ, ಪ್ಯಾಕೇಜ್ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ ಕಾಯ್ದೆ-1999 ಮತ್ತು ಕೆ.ಟಿ.ಪಿ.ಪಿ ನಿಯಮಗಳು-2000 ಹಾಗೂ e-procurement ಮುಖಾಂತರ ಕೈಗೊಂಡು, ಟೆಂಡರ್ ಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 47 ಎಸ್.ಎಫ್.ಸಿ 2016. ಬೆಂಗಳೂರು, ದಿನಾಂಕ: 14-06-2016 ಮತ್ತು 03-11-2016 ರಂತೆ ಸಕ್ಷಮ ಪ್ರಾಧಿಕಾರದ ಅನುಮೋದನೆಯನ್ನು ಪಡೆದು, ಕಾಮಗಾರಿಗಳನ್ನು ಮುಂದಿನ ಎರಡು ವರ್ಷಗಳಲ್ಲಿ ಹಂತ ಹಂತವಾಗಿ ಅನುಷ್ಠಾನಗೊಳಿಸುವುದು. ಯಾವುದೇ ಕಾಮಗಾರಿಗಳನ್ನು ವಿಭಜಿಸತಕ್ಕದ್ದಲ್ಲ.

3. ಈ ಕ್ರಿಯಾ ಯೋಜನೆಯಲ್ಲಿ ಒಳಗೊಂಡಿರುವ ಕಾಮಗಾರಿಗಳು ಇತರೆ ಯಾವುದೇ ಯೋಜನೆ / ಅನುದಾನದಡಿಯಲ್ಲಿ ಪುನರಾವರ್ತನೆಯಾಗಿರುವುದಿಲ್ಲ ಎಂಬ ಬಗ್ಗೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಪೂರ್ವಾನ್ವಯವಾಗಿ ಖಚಿತಪಡಿಸಿಕೊಂಡು ಟೆಂಡರ್ ಆಹ್ವಾನಿಸತಕ್ಕದ್ದು.

4. ಅನುಮೋದಿತ ಕ್ರಿಯಾಯೋಜನೆಯಲ್ಲಿ ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳನ್ನು ಅಳವಡಿಸಿಕೊಂಡು ಟೆಂಡರ್ ಕರೆದು ಅನುಷ್ಠಾನಗೊಳಿಸುವುದು ಬಿಬಿಎಂಪಿಯ ಮುಖ್ಯ ಆಯುಕ್ತರ ವೈಯಕ್ತಿಕ

...5/-

Scanned with CamScanner

ಜವಾಬ್ದಾರಿಯಾಗಿರುತ್ತದೆ. ಈ ಆದೇಶ ಹೊರಡಿಸಿದ ಒಂದು ತಿಂಗಳೊಳಗಾಗಿ ಬಿಬಿಎಂಪಿಯ ಮುಖ್ಯ ಆಯುಕ್ತರು ತಮ್ಮ ಹಂತದಲ್ಲಿ ಕ್ರಿಯಾ ಯೋಜನೆಯ ಕಾಮಗಾರಿಗಳನ್ನು ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳಾಗಿ ವಿಂಗಡಿಸಿ ಆದೇಶ ಹೊರಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವುದು.

5. ಕಾಮಗಾರಿಗಳ ಗುಣಮಟ್ಟದ ಬಗ್ಗೆ ಸಂಬಂಧಪಟ್ಟ ಬಿಬಿಎಂಪಿಯ ಪ್ರಧಾನ ಅಭಿಯಂತರರು ಹಾಗೂ ಸಂಬಂಧಪಟ್ಟ ಮುಖ್ಯ ಅಭಿಯಂತರರುಗಳು ನಿಗಾವಹಿಸಿ, ಉತ್ತಮ ಗುಣಮಟ್ಟದ ಆಸ್ತಿ ಸೃಜನೆಗೆ ಕಟ್ಟುನಿಟ್ಟಿನ ಕ್ರಮ ವಹಿಸತಕ್ಕದ್ದು.

6. ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕಾಮಗಾರಿಗಳ ಗುಣಮಟ್ಟದ ಬಗ್ಗೆ ಪ್ರತಿಷ್ಠಿತ ಸಂಸ್ಥೆಗಳಿಂದ ಗುಣಮಟ್ಟದ ತಪಾಸಣಾ ಕೈಗೊಂಡು ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

7. ಈ ಆದೇಶದಲ್ಲಿ ಅನುಮೋದನೆ ನೀಡಿರುವ ಕಾಮಗಾರಿಗಳ ಅನುಷ್ಠಾನ ವೇಳಾಪಟ್ಟಿಯನ್ನು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಯಾರಿಸಿ, ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಕಾಮಗಾರಿಗಳ ಪ್ರಗತಿ ವರದಿಯನ್ನು ಪ್ರತಿ ಮಾಹೆ ಎಂಪಿಕ್ ಸಭೆಗೆ ಸರ್ಕಾರಕ್ಕೆ ತಪ್ಪದೆ ಸಲ್ಲಿಸತಕ್ಕದ್ದು.

8. ಸರ್ಕಾರವು ಅನುಮೋದನೆ ನೀಡಿರುವ ಕಾಮಗಾರಿಗಳನ್ನು ಬದಲಾವಣೆ ಮಾಡತಕ್ಕದ್ದಲ್ಲ. ಯಾವುದಾದರೂ ಅನುಮೋದಿತ ಕಾಮಗಾರಿಯ ಅಗತ್ಯವಿಲ್ಲವೆಂದು ಆ ನಂತರದಲ್ಲಿ ತಿಳಿದುಬಂದಲ್ಲಿ ಸಂಬಂಧಪಟ್ಟ ಅಂದಾಜು ಮೊತ್ತವನ್ನು ಉಳಿತಾಯವೆಂದು ಪರಿಗಣಿಸತಕ್ಕದ್ದು.

9. ಕರ್ನಾಟಕ ಆರ್ಥಿಕ ಸಂಹಿತೆ-1958, ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಲಕ್ಷ್ಮೀಸಾಗರ್ ಎನ್.ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

**ಇವರಿಗೆ:**

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.



Scanned with CamScanner